**ಪಿ.ಡಬ್ಲ್ಯುಃ 1**

**ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.**

**ದಿನಾಂಕಃ** 13-02-2026

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದಃ-**

ಈ ಪ್ರಕರಣದಲ್ಲಿ ನಾನು ಅರ್ಜಿದಾರನಾಗಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಗಾಯದ ಪ್ರಮಾಣ ಪತ್ರ,, ಚಾರ್ಜ್ ಶೀಟ್ ಪ್ರತಿ, ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ ನಿಪಿ-4 ಎಂದು ಗುರುತಿಸಲಾಯಿತು. ಒಂದು ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿದ್ದು, ಸದರಿ ದಾಖಲೆಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-5 ಎಂದು ಗುರುತಿಸಲಾಯಿತು. ಅದೇ ರೀತಿ ಎಂಟು ವೈದ್ಯಕೀಯ ಔಷಧಿ ವೆಚ್ಚ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-6 ರಿಂದ ನಿಪಿ-13 ಎಂದು ಗುರುತಿಸಲಾಯಿತು. 5 ವೈದ್ಯಕೀಯ ಔಷಧಿ ಚೀಟಿಯನ್ನು ಗಳನ್ನು ಮತ್ತು ಒಂದು ಎಕ್ಸರೆ ಪ್ರತಿಯಿನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-14 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಅರ್ಜಿದಾರರ ಪರ ವಕೀಲರು ಮುಂದುವರಿದ ಮುಖ್ಯವಿಚಾರಣೆಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.)**

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಮೆಂಬರ್ ಎಡಿಶನಲ್ ಎಂ.ಎ.ಸಿ.ಟಿ. ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**